ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 24 ಇಎಸ್‌ಟಿ 4 (ಬಿ)(3) 2018 / 829

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 25.07.2019

## ಸುತ್ತೋಲೆ

ವಿಷಯ: ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ನೌಕರರಿಗೆ ತತ್ಪರಿಣಾಮವಾದ ಜ್ಯೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017 ರನ್ವಯ ಕ್ರಮ ತೆಗೆದುಕೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 182 ಸೇನೆನಿ 2011, ದಿ: 05.01.2018
2. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್‌ಆರ್‌ಎಸ್ 2018, ದಿನಾಂಕ: 27.02.2019
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್‌ಆರ್‌ಎಸ್ 2018, ದಿನಾಂಕ: 05.03.2019
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್‌ಆರ್‌ಎಸ್ 2018, ದಿನಾಂಕ: 15.05.2019
5. ಈ ಕಛೇರಿ ಹಿಂಬರಹ ಸಂಖ್ಯೆ:ಡಿಟಿಇ 01 ಇಎಸ್‌ಟಿ 09 2019, ದಿ: 27.05.2019

*-*-*-*-*

ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲು ಸಂಖ್ಯೆ 2368/2011 ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಮತ್ತು ಇತರರು ಪ್ರಕರಣದಲ್ಲಿ ಮಾನ್ಯ ನ್ಯಾಯಾಲಯದ ದಿನಾಂಕ: 09.02.2017 ರ ಆದೇಶದಲ್ಲಿ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ವೃಂದದ ಜ್ಯೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸಿ, ಪರಿಷ್ಕೃತ ಜ್ಯೇಷ್ಠತಾ ಪಟ್ಟಿಗಳನ್ನಾಧರಿಸಿ ಕ್ರಮವಹಿಸಲು ಸೂಚಿಸಿದ್ದ ಹಿನ್ನೆಲೆಯಲ್ಲಿ ಉಲ್ಲೇಖ 01 ರ ಸರ್ಕಾರದ ಸುತ್ತೋಲೆಯಲ್ಲಿ ವಿವಿಧ ವೃಂದದ ಹುದ್ದೆಗಳ ಮುಂಬಡ್ತಿಗಳನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ತಿಳಿಸಲಾಗಿತ್ತು.

ನಂತರ ಸರ್ಕಾರವು ಜಾರಿಗೆ ತಂದ **ಕರ್ನಾಟಕ (ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜ್ಯೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017 ಅನ್ನು** ಜಾರಿಗೊಳಿಸುವುದಕ್ಕೆ ಸಂಬಂಧಿಸಿದಂತೆ ಸೂಚನೆಗಳನ್ನು ಹೊರಡಿಸಿದ ಉಲ್ಲೇಖ 02 ರ ಸರ್ಕಾರದ ಆದೇಶದಲ್ಲಿ ಪರಿಷ್ಕೃತ ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸಿದ ನಂತರವೇ ಅಂತಹ ಜ್ಯೇಷ್ಠತಾ ಪಟ್ಟಿಗಳನ್ನು ಆಧಾರವಾಗಿಟ್ಟುಕೊಂಡು ಮುಂಬಡ್ತಿ ನೀಡುವ ಪ್ರಕ್ರಿಯೆಯನ್ನು ಪ್ರಾರಂಭಿಸಬಹುದೆಂದು ತಿಳಿಸಲಾಗಿತ್ತು.

ಆದರೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಉಲ್ಲೇಖ 02ರ ಸರ್ಕಾರದ ಆದೇಶದ ಅನುಷ್ಠಾನಕ್ಕೆ ತಡೆಯಾಜ್ಞೆ ನೀಡಿದ್ದರಿಂದ ಈ ಬಗ್ಗೆ ಸರ್ಕಾರದಿಂದ ಮುಂದಿನ ನಿರ್ದೇಶನ ನೀಡುವವರೆಗೆ ಸದರಿ ಆದೇಶದ ಅನುಷ್ಠಾನಕ್ಕೆ ಯಾವುದೇ ಕ್ರಮ ಕೈಗೊಳ್ಳತಕ್ಕದ್ದಲ್ಲವೆಂದು ಉಲ್ಲೇಖ 03ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿತ್ತು.

ತದನಂತರ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ: 2368/2011 ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಮತ್ತು ಇತರರು ಮತ್ತು ಸಂಬಂಧಿಸಿದ ರಿವ್ಯೂ ಅರ್ಜಿ

......2

ಹಾಗೂ ರಿಟ್ ಅರ್ಜಿಗಳಲ್ಲಿನ ಪ್ರಕರಣ ಸಂಖ್ಯೆ: ಎಂ.ಎ.1151/2018 ರಲ್ಲಿ ದಿನಾಂಕ: 10.05.2019 ನೀಡಿರುವ ತೀರ್ಪಿನಲ್ಲಿ ಕರ್ನಾಟಕ (ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜ್ಯೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017ರ ಸಾಂವಿಧಾನಿಕ ಸಿಂಧುತ್ವವನ್ನು ಎತ್ತಿಹಿಡಿದಿರುವುದಾಗಿ ತೀರ್ಪು ನೀಡಿರುತ್ತದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ (ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮವಾದ ಜ್ಯೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017 ಅನ್ನು **ಅನುಷ್ಠಾನಗೊಳಿಸುವುದಕ್ಕೆ ಸಂಬಂಧಿಸಿದಂತೆ** ಮೇಲೆ (2) ರಲ್ಲಿ ಓದಲಾದ ದಿ: 27.02.2019 ರ ಆದೇಶದಲ್ಲಿನ ಸೂಚನೆಗಳನ್ವಯ ತಾತ್ಕಾಲಿಕ/ಅಂತಿಮ ಜ್ಯೇಷ್ಠತಾ ಪಟ್ಟಿಗಳನ್ನು ತಯಾರಿಸಿ ಪ್ರಕಟಿಸುವ ಮತ್ತು ಅರ್ಹತಾ ದಿನಾಂಕಗಳನ್ನು ನಿಗದಿಪಡಿಸುವ ಮತ್ತು ಮುಂಬಡ್ತಿಗಳನ್ನು ಪುನರಾವಲೋಕನೆ ಮಾಡುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಉಲ್ಲೇಖ 04 ರ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ. ಸದರಿ ಆದೇಶದಂತೆ ಕ್ರಮ ಕೈಗೊಳ್ಳಲು ಉಲ್ಲೇಖ 05 ರ ಹಿಂಬರಹದಲ್ಲಿ ಈಗಾಗಲೇ ತಾಂತ್ರಿಕ ಶಿಕ್ಷಣ ಇಲಾಖೆಯ ಎಲ್ಲಾ ಸರ್ಕಾರಿ/ಅನುದಾನಿತ ಶಿಕ್ಷಣ ಸಂಸ್ಥೆಗಳಿಗೆ ಸೂಚಿಸಲಾಗಿದೆ.

ಆದುದರಿಂದ ಉಲ್ಲೇಖ 02 ಮತ್ತು 04 ರ ಸರ್ಕಾರದ ಆದೇಶಗಳಲ್ಲಿನ ಸೂಚನೆಗಳನ್ವಯ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿನ ಸಿಬ್ಬಂದಿಗಳ ಜ್ಯೇಷ್ಠತೆ ಅನುಸಾರ ಮುಂಬಡ್ತಿ ಪ್ರಕ್ರಿಯೆಯ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಲಾಗಿದೆ.

ಆಡಳಿತಾಧಿಕಾರಿ
ತಾಂತ್ರಿಕ ಶಿಕ್ಷಣ ಇಲಾಖೆ

**ಇವರಿಗೆ:**
ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳು.

ಪ್ರತಿ: ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ (ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು)